**"ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ", "ವಿದ್ಯಾಸಿರಿ-ಊಟ ಮತ್ತು ವಸತಿ ಸಹಾಯ ಯೋಜನೆ", ಮತ್ತು "ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ" ಸೌಲಭ್ಯ ಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು.**

1. ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.
2. ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿ ಆಗಿರಬೇಕು.
3. ಕರ್ನಾಟಕದ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ ಸ್ಥಳೀಯ ಸಂಸ್ಥೆ/ಅನುದಾನಿತ ಸಂಸ್ಥೆಗಳು/ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ - ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.
4. ಈ ಯೋಜನೆಗಳಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್ ಲೈನ್ (Online) ಮೂಲಕ ಅರ್ಜಿ ಸಲ್ಲಿಸಬೇಕು.
5. ಸಮಾಜ ಕಲ್ಯಾಣ ಇಲಾಖೆ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಸೇರುವ ವಿದ್ಯಾರ್ಥಿಗಳು ಸದರಿ ಸೌಲಭ್ಯಕ್ಕಾಗಿ ಆಯಾ ಇಲಾಖೆಯನ್ನೇ ಸಂಪರ್ಕಿಸುವುದು
6. "ಮೆಟ್ರಿಕ್-ನಂತರದ ವಿದ್ಯಾರ್ಥಿ ವೇತನ", "ಶುಲ್ಕ ವಿನಾಯಿತಿ", ವಿದ್ಯಾಸಿರಿ-"ಊಟ ಮತ್ತು ವಸತಿ ಸಹಾಯ ಯೋಜನೆ" ಮತ್ತು ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ ತಂದೆ-ತಾಯಿ/ಪೋಷಕರ ಕುಟುಂಬದ ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು. ಪ್ರವರ್ಗ -1 ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷಗಳು ಪ್ರವರ್ಗ-2ಎ, 3ಎ, 3ಬಿ ಮತ್ತು ಇತರೆ ಹಿಂದುಳಿದ ವಿದ್ಯಾರ್ಥಿಗಳು ಹಾಗೂ ಇತರೆ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ
7. ಅ) (i) ವಿದ್ಯಾರ್ಥಿನಿಲಯದಲ್ಲಿ ಪ್ರವೇಶ (ii) ಊಟ ಮತ್ತು ವಸತಿ ಸಹಾಯ ಯೋಜನೆ (iii) ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಇವುಗಳಲ್ಲಿ ಒಬ್ಬ ವಿದ್ಯಾರ್ಥಿಯು ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರು. ಆದರೆ ಶುಲ್ಕವಿನಾಯಿತಿ ಸೌಲಭ್ಯವನ್ನು ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೂ ನೀಡಲಾಗುವುದು.

   ಆ) ಯಾವುದೇ ಇಲಾಖೆಯ ಸರ್ಕಾರಿ/ಸರ್ಕಾರಿ ಅನುದಾನಿತ ವಿದ್ಯಾರ್ಥಿ ನಿಲಯ/ ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈ ಸೌಲಭ್ಯವನ್ನು ಒದಗಿಸಲಾಗುವುದು

   ಇ) ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನಕ್ಕೆ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ, ಶುಲ್ಕ ವಿನಾಯಿತಿ, ವಿದ್ಯಾಸಿರಿ – ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯ ಪಡೆಯಲು ಅರ್ಹರಿರುವುದಿಲ್ಲ.

   ಈ) ಪಿ.ಹೆಚ್.ಡಿ. ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ಶುಲ್ಕವಿನಾಯಿತಿಗೆ ಅರ್ಜಿ ಆಹವಾನಿಸುವುದಿಲ್ಲ. **www.karepass.cgg.gov.in** ವೆಬ್ ಸೈಟ್ ನಲ್ಲಿಯೇ ಅರ್ಜಿ ಸಲ್ಲಿಸುವುದು. ( ಪಿ.ಎಚ್.ಡಿ ಫೆಲೋಶಿಪ್ ಗೆ ಪ್ರತ್ಯೇಕವಾಗಿ ಅರ್ಜಿಯನ್ನು ಆಹ್ವಾನಿಸಲಾಗುವುದು).
8. ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ. ನಂತರ ಬಿ.ಕಾಂ, ಎಂ.ಎ. (ಕನ್ನಡ) ನಂತರ ಎಂ.ಎ.(ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ. ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ )

   ಆ) ಸ್ನಾತಕೋತ್ತರ, ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

ಇ) ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ/ ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮಾ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

9. 1 ಹೊಸ ವಿದ್ಯಾರ್ಥಿಗಳು :- ಹೊಸದಾಗಿ ಅರ್ಜಿ ಸಲ್ಲಿಸುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ವಿದ್ಯಾಸಿರಿ – ಊಟ ಮತ್ತು ವಸತಿ ಸಹಾಯ ಯೋಜನೆ /ಶುಲ್ಕ ವಿನಾಯಿತಿ/ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ನರ್ಸಿಂಗ್ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಕಾರ್ಯಕ್ರಮಗಳ ಸೌಲಭ್ಯ ಪಡೆಯಲು ಒಂದೇ ಅರ್ಜಿ ಸಲ್ಲಿಸಬೇಕು.

2 ನವೀಕರಣ ವಿದ್ಯಾರ್ಥಿಗಳು:- ಈಗಾಗಲೇ 2018-19ನೇ ಸಾಲಿನಲ್ಲಿ ಸಲ್ಲಿಸಿರುವ ಅರ್ಜಿ ಸಂಖ್ಯೆಯನ್ನು ನಮೂದಿಸಿ 2019-20 ನೇ ಸಾಲಿಗೆ ನವೀಕರಣ ಅರ್ಜಿಯನ್ನು ಸಲ್ಲಿಸಬೇಕು.

10. ಈ ಕೆಳಗಿನ ಮೂಲ ದಾಖಲೆಗಳನ್ನು ಪ್ರತ್ಯೇಕವಾಗಿ ಸ್ಕ್ಯಾನ್ ಮಾಡಿ, ಅರ್ಜಿ ಸಲ್ಲಿಸುವಾಗ ಅಪ್ ಲೋಡ್ ಮಾಡಬೇಕು.

(ಪ್ರತಿ ದಾಖಲೆಯು 100 KB ಯೊಳಗೆ JPG Format ಇರಬೇಕು)

1 ಜಾತಿ ಮತ್ತು ಆದಾಯ ಪ್ರಮಾಣ ಪತ್ರ

2 ಹಿಂದಿನ ವರ್ಷದಲ್ಲಿ ಉತ್ತೀರ್ಣರಾದ ಮೂಲ ಅಂಕಪಟ್ಟಿ

3 ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ, ವಿದ್ಯಾರ್ಥಿಯ ಹೆಸರಿನಲ್ಲಿ ಉಳಿತಾಯ ಖಾತೆಯನ್ನು ತೆರೆದಿರಬೇಕು. (ಬ್ಯಾಂಕ್ ಖಾತೆಯಲ್ಲಿನ ಹೆಸರು, ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿ ಇರುವ ರೀತಿಯಲ್ಲಿಯೇ ಇರಬೇಕು) ಪಾಸ್ ಬುಕ್ ಹೊಂದಿರಬೇಕು. ಬ್ಯಾಂಕ್ ಅಕೌಂಟ್ ನಂಬರ್ ಮತ್ತು IFSC ಕೋಡ್ ಇರುವ ಮೊದಲ ಪುಟದ ಭಾಗದ ಪ್ರತಿ ಸಲ್ಲಿಸಬೇಕು. ವಿದ್ಯಾರ್ಥಿಯು ಉಳಿತಾಯ ಖಾತೆ ಸಂಖ್ಯೆ ಹಾಗೂ IFSC ಕೋಡ್ ತಪ್ಪಿಲ್ಲದಂತೆ ನಮೂದಿಸಬೇಕು. ವಿದ್ಯಾರ್ಥಿಯು ತಪ್ಪಾಗಿ ನಮೂದು ಮಾಡಿದಲ್ಲಿ ಪರಿಷ್ಕರಣೆಗೆ ಅವಕಾಶ ಇರುವುದಿಲ್ಲ.

4 ಆಧಾರ್ ಬಳಸಲು, ಆಧಾರ್ ಬಳಕೆ ಅನುಮತಿ ಪ್ರಮಾಣ ಪತ್ರ ಕಡ್ಡಾಯವಾಗಿ ನೀಡಬೇಕು

4ಎ ಮೇಲ್ಕಂಡ ಎಲ್ಲಾ ಸರ್ಕಾರಿ ಸವಲತ್ತುಗಳನ್ನು ಪಡೆಯಲು ಆಧಾರ್ ಸಂಖ್ಯೆಯ ಮಾಹಿತಿಗಳನ್ನು UIDAI ನಿಂದ ಪಡೆದು ಕೊಳ್ಳಲು ವಿದ್ಯಾರ್ಥಿಗಳು ಆಧಾರ್-ಕನ್ಸೆಂಟ್ ನಮೂನೆಗೆ ದೃಢೀಕರಣವನ್ನು ಕಡ್ಡಾಯವಾಗಿ ನೀಡಬೇಕು.

5 ವೆಬ್ ಸೈಟ್ ನಲ್ಲಿ ನೀಡಿರುವ Mandate form ನ್ನು ಡೌನ್ ಲೋಡ್ ಮಾಡಿಕೊಂಡು ವಿದ್ಯಾರ್ಥಿಯ ಬ್ಯಾಂಕ್ ಖಾತೆಯ ವಿವರಗಳನ್ನು ಭರ್ತಿಮಾಡಿ, ಸಹಿಮಾಡಿದ ಪ್ರತಿಯನ್ನು ಆನ್ ಲೈನ್ ನಲ್ಲಿ ಅಪ್ ಲೋಡ್ ಮಾಡುವುದು ಹಾಗೂ ಹಾರ್ಡ್ ಪ್ರತಿ(Hard Copy)ಗಳನ್ನು ಸಲ್ಲಿಸುವುದು.

6 ಪಡಿತರ ಚೀಟಿ ಇದ್ದಲ್ಲಿ ಅದರ ಪ್ರತಿ

7 ಅಂಧ ವಿದ್ಯಾರ್ಥಿಗಳಾಗಿದ್ದಲ್ಲಿ "ಅಂಧತ್ವ ಪ್ರಮಾಣ ಪತ್ರ" ವನ್ನು ಕಡ್ಡಾಯವಾಗಿ ಅಪ್ ಲೋಡ್ ಮಾಡಬೇಕು. ಇಂತಹ ವಿದ್ಯಾರ್ಥಿಗಳಿಗೆ ನಿಗದಿತ ಶುಲ್ಕಗಳ ಜೊತೆಗೆ ಜೊತೆಗೆ ಹೆಚ್ಚುವರಿಯಾಗಿ "ರೀಡರ್ ಚಾರ್ಜ್" (Reader Charge) ಅನ್ನು ಸಹ ಶುಲ್ಕವಿನಾಯಿತಿ ಯೋಜನೆಯಡಿ ಮಂಜೂರು ಮಾಡಲಾಗುವುದು.

8 ಅರ್ಜಿ ಸಲ್ಲಿಸುವಾಗ ಒಂದು ಕಾಲೇಜಿನಲ್ಲಿ ಪ್ರವೇಶ ಪಡೆದು ತದನಂತರ ಬೇರೊಂದು ಕಾಲೇಜು ಹಾಗೂ ಕೋರ್ಸನ್ನು ಬದಲಾವಣೆ ಮಾಡಿಕೊಳ್ಳುವ ವಿದ್ಯಾರ್ಥಿಗಳು ತಕ್ಷಣ ಆಯಾಯ ಜಿಲ್ಲೆಯ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಅಥವಾ ಆಯುಕ್ತಾಲಯ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ Helpline ನಂಬರನ್ನು ಸಂಪರ್ಕಿಸಿ ಅಗತ್ಯ ಬದಲಾವಣೆಗಳನ್ನು ಮಂಜೂರಾತಿಗಿಂತ ಪೂರ್ವದಲ್ಲಿಯೇ ಮಾಡಿಕೊಳ್ಳಬೇಕು, ಇಂತಹ ಪ್ರಕರಣಗಳಿಗೆ ವಿದ್ಯಾರ್ಥಿಗಳೇ ಹೊಣೆಗಾರರಾಗಿರುತ್ತಾರೆ.

ಹೆಚ್ಚಿನ ಹಾಗೂ ಈ ಕಾರ್ಯಕ್ರಮಗಳ ಸರ್ಕಾರದ ಆದೇಶಗಳಿಗಾಗಿ ವಿದ್ಯಾರ್ಥಿಗಳು ಸಂಬಂಧಿಸಿದ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು/ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳನ್ನು ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್ ಸೈಟ್ www.backwardclasses.kar.nic.in ಹಾಗೂ kareepass.cgg.gov.in ಸಂಪರ್ಕಿಸಬಹುದು.